**National**
**Kannada**
**22.07.2026 19.35 hrs**
**ಆಕಾಶವಾಣಿ, ಬೆಂಗಳೂರು**

# ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ನೀಟ್ ವಿಷಯವಾಗಿ ಮುಂದುವರಿದ ಗದ್ದಲ; ಸಂಸತ್ತಿನ ಉಭಯ ಸದನಗಳ ಕಲಾಪ ದಿನದ ಮಟ್ಟಿಗೆ ಮುಂದೂಡಿಕೆ
2. ವಿದ್ಯಾರ್ಥಿಗಳ ಪ್ರತಿಯೊಂದು ಸಮಸ್ಯೆ ಆಲಿಸಲು, ಪರಿಹರಿಸಲು ಸರ್ಕಾರ ಸಿದ್ಧ – ಕೇಂದ್ರ ಸಚಿವ ರಾಜನಾಥ್ ಸಿಂಗ್
3. ಹಾರ್ಮುಜ್ ಜಲಸಂಧಿ ನಿಯಂತ್ರಿಸಲು ಇರಾನ್‌ಗೆ ಅವಕಾಶ ನೀಡುವುದು ಅಪಾಯಕಾರಿ – ಅಮೆರಿಕ ವಿದೇಶಾಂಗ ಸಚಿವ ಮಾರ್ಕೊ ರುಬಿಯೊ
4. ಚೀನಾ ಓಪನ್ ಬ್ಯಾಡ್ಮಿಂಟನ್; ಎರಡನೇ ಸುತ್ತಿಗೆ ಪಿ.ವಿ.ಸಿಂಧು ಮುನ್ನಡೆ

---

ನೀಟ್ ಪತ್ರಿಕೆ ಸೋರಿಕೆ ಪ್ರಕರಣ ಮತ್ತು ವಿದ್ಯಾರ್ಥಿಗಳ ಪ್ರತಿಭಟನೆ ಸೇರಿದಂತೆ ವಿವಿಧ ವಿಷಯಗಳ ಕುರಿತು ವಿರೋಧ ಪಕ್ಷಗಳು ಸತತ ಮೂರನೇ ದಿನವೂ ಅಡ್ಡಿಪಡಿಸಿದ ಹಿನ್ನೆಲೆಯಲ್ಲಿ ಸಂಸತ್ತಿನ ಉಭಯ ಸದನಗಳನ್ನು ದಿನದ ಮಟ್ಟಿಗೆ ಮುಂದೂಡಲಾಯಿತು.

ಲೋಕಸಭೆಯಲ್ಲಿ, ಗದ್ದಲದ ನಡುವೆಯೇ, ತೃಣಮೂಲ ಕಾಂಗ್ರೆಸ್ ಸಂಸದ ಕಲ್ಯಾಣ್ ಬ್ಯಾನರ್ಜಿ ಅವರನ್ನು ಮಳೆಗಾಲದ ಉಳಿದ ಅವಧಿಗೆ ಅಮಾನತುಗೊಳಿಸುವ ನಿರ್ಣಯವನ್ನು ಸದನವು ಧ್ವನಿ ಮತದ ಮೂಲಕ ಅಂಗೀಕರಿಸಿತು.

ಮಹಿಳಾ ಸಂಸದರನ್ನು ಗುರಿಯಾಗಿಸಿಕೊಂಡು ಕಲ್ಯಾಣ್ ಬ್ಯಾನರ್ಜಿ ಆಕ್ಷೇಪಾರ್ಹ ಮತ್ತು ಸಂಸತ್ತಿಗೆ ವಿರುದ್ಧವಾದ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಪೀಠಾಸೀನಾಧಿಕಾರಿ ಕೃಷ್ಣ ಪ್ರಸಾದ್ ಟೆನ್ನೇಟಿ ಹೇಳಿದರು. ಸಂಸದೀಯ ವ್ಯವಹಾರಗಳ ರಾಜ್ಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಈ ನಿರ್ಣಯವನ್ನು ಮಂಡಿಸಿದರು.

ಇದಕ್ಕೂ ಮುನ್ನ, ಸ್ಪೀಕರ್ ಓಂ ಬಿರ್ಲಾ, ವಿರೋಧ ಪಕ್ಷದ ಸದಸ್ಯರಿಗೆ ಸದನವು ಸುಗಮವಾಗಿ ನಡೆಯಲು ಅವಕಾಶ ನೀಡುವಂತೆ ಮನವಿ ಮಾಡಿದರು ಮತ್ತು ನೀಟ್ ವಿಷಯದ ಕುರಿತು ಚರ್ಚೆಗೆ ಸರ್ಕಾರ ಸಿದ್ಧವಿದೆ ಎಂದು ಹೇಳಿದರು.

ನೀಟ್ ವಿಷಯ ಮತ್ತು ಇತರ ವಿಷಯಗಳ ಕುರಿತು ರಾಜ್ಯಸಭೆಯಲ್ಲಿಯೂ ಪದೇ ಪದೆ ಗದ್ದಲ ಉಂಟಾಯಿತು. ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಾತನಾಡಿ, ಸರ್ಕಾರ ಈ ವಿಷಯದ ಬಗ್ಗೆ ಚರ್ಚಿಸಲು ಇಚ್ಛಿಸಿದ್ದರೂ, ಕಾಂಗ್ರೆಸ್ ಹೊಸ ಷರತ್ತುಗಳನ್ನು ವಿಧಿಸುವ ಮೂಲಕ ಚರ್ಚೆಯನ್ನು ತಪ್ಪಿಸುತ್ತಿದೆ ಎಂದು ಆರೋಪಿಸಿದರು.

---

ಮಕ್ಕಳು ಸೇರಿದಂತೆ ಬಳಕೆದಾರರಿಗೆ ಮುಕ್ತ, ಸುರಕ್ಷಿತ, ವಿಶ್ವಾಸಾರ್ಹ ಮತ್ತು ಜವಾಬ್ದಾರಿಯುತ ಇಂಟರ್ನೆಟ್ ಅನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಸರ್ಕಾರದ ನೀತಿಗಳು ಹೊಂದಿವೆ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ಲೋಕಸಭೆಯಲ್ಲಿ ಇಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಡಿಜಿಟಲ್ ವೈಯಕ್ತಿಕ ದತ್ತಾಂಶ ಸಂರಕ್ಷಣಾ ಕಾಯ್ದೆ 2023 ಅನ್ನು ಜಾರಿಗೆ ತರಲಾಗಿದೆ. ಇದು ಡಿಜಿಟಲ್ ವೈಯಕ್ತಿಕ ದತ್ತಾಂಶ ಸಂಸ್ಕರಣೆಯನ್ನು ನಿಯಂತ್ರಿಸಲು ಹಾಗೂ ಮಕ್ಕಳ ಆನ್‌ಲೈನ್ ಗೌಪ್ಯತೆಯನ್ನು ಕಾಪಾಡಲು ಕಾನೂನು ಚೌಕಟ್ಟನ್ನು ಒದಗಿಸುತ್ತದೆ ಎಂದು ತಿಳಿಸಿದರು.

ಮಕ್ಕಳ ವೈಯಕ್ತಿಕ ದತ್ತಾಂಶವನ್ನು ಸಕ್ರಿಯೆಗೊಳಿಸಲು ಪೋಷಕರ ಒಪ್ಪಿಗೆಯನ್ನು ಇದು ಕಡ್ಡಾಯಗೊಳಿಸುತ್ತದೆ. ಟ್ರ್ಯಾಕಿಂಗ್, ನಡವಳಿಕೆಯ ಮೇಲ್ವಿಚಾರಣೆ ಅಥವಾ ಮಕ್ಕಳ ಕಡೆಗೆ ಉದ್ದೇಶಿತ ಜಾಹೀರಾತುಗಳಂತಹ, ಅವರ ಯೋಗಕ್ಷೇಮಕ್ಕೆ ಹಾನಿಕಾರಕ ಅಭ್ಯಾಸಗಳನ್ನು ನಿಷೇಧಿಸುತ್ತದೆ ಎಂದು ಅವರು ವಿವರಿಸಿದರು.

ಆನ್‌ಲೈನ್ ಗೇಮಿಂಗ್‌ನ ಪ್ರಚಾರ ಮತ್ತು ನಿಯಂತ್ರಣ ಕಾಯ್ದೆ 2025 ಯುವಜನರಲ್ಲಿ ಡಿಜಿಟಲ್ ವ್ಯಸನ ಮತ್ತು ಆರ್ಥಿಕ ಹಾನಿಯನ್ನು ಪರಿಹರಿಸಲು ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

---

ಅಶ್ಲೀಲ ವಿಷಯವನ್ನು ಪ್ರದರ್ಶಿಸಿದ್ದಕ್ಕಾಗಿ ಕಳೆದ ಎರಡು ವರ್ಷಗಳಲ್ಲಿ ಸರ್ಕಾರ ದೇಶದಲ್ಲಿ 50 ಒಟಿಟಿ ಪ್ಲಾಟ್‌ಫಾರ್ಮ್‌ಗಳನ್ನು ಸಾರ್ವಜನಿಕ ಪ್ರವೇಶದಿಂದ ನಿಷ್ಕ್ರಿಯಗೊಳಿಸಿದೆ.

ಲೋಕಸಭೆಯಲ್ಲಿ ಲಿಖಿತ ಉತ್ತರದಲ್ಲಿ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್.ಮುರುಗನ್, ದೂರುಗಳ ಆಧಾರದ ಮೇಲೆ ಸರ್ಕಾರ, ಅಂತಹ ಒಟಿಟಿ ಪ್ಲಾಟ್‌ಫಾರ್ಮ್‌ಗಳ ವಿರುದ್ಧ ನಿಯಮಿತವಾಗಿ ಕ್ರಮ ಕೈಗೊಳ್ಳುತ್ತದೆ ಎಂದು ತಿಳಿಸಿದರು.

---

ದೇಶಾದ್ಯಂತ ಪ್ರಸ್ತುತ 162 ವಂದೇ ಭಾರತ್ ರೈಲು ಸೇವೆಗಳು ಕಾರ್ಯನಿರ್ವಹಿಸುತ್ತಿವೆ ಎಂದು ಸರ್ಕಾರ ಹೇಳಿದೆ.

ಲೋಕಸಭೆಯಲ್ಲಿ ಇಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಪ್ರಯಾಣಿಕರ ಪ್ರಯಾಣದ ಅನುಭವ ಹೆಚ್ಚಿಸಲು ರೈಲ್ವೆ ಸ್ಥಳೀಯವಾಗಿ ವಿನ್ಯಾಸಗೊಳಿಸಿದ ಮತ್ತು ತಯಾರಿಸಿದ ವಂದೇ ಭಾರತ್ ರೈಲುಗಳನ್ನು ಪರಿಚಯಿಸಿದೆ. ವಂದೇ ಭಾರತ್ ಸ್ಲೀಪರ್ ರೈಲನ್ನು ದೂರದ ಪ್ರಯಾಣಕ್ಕಾಗಿ ಸ್ಥಳೀಯವಾಗಿ ವಿನ್ಯಾಸಗೊಳಿಸಿ, ಅಭಿವೃದ್ಧಿಪಡಿಸಲಾಗಿದೆ ಎಂದು ಹೇಳಿದರು.

---

ದೆಹಲಿಯಲ್ಲಿ ನಡೆಯುತ್ತಿರುವ ಪ್ರತಿಭಟನೆಗಳ ಬಗ್ಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕಳವಳ ವ್ಯಕ್ತಪಡಿಸಿದ್ದು, ಕೇಂದ್ರ ಸರ್ಕಾರ ಯುವಜನರ ಭಾವನೆಗಳಿಗೆ ತೀವ್ರ ಸಂವೇದನಾಶೀಲವಾಗಿದೆ. ವಿದ್ಯಾರ್ಥಿಗಳು ಎತ್ತುವ ಪ್ರತಿಯೊಂದು ಸಮಸ್ಯೆಯನ್ನು ಆಲಿಸಲು ಮತ್ತು ಪರಿಹರಿಸಲು ಸಿದ್ಧವಾಗಿದೆ ಎಂದು ಹೇಳಿದ್ದಾರೆ.

ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವರು, ಕೆಲವು ವ್ಯಕ್ತಿಗಳು ತಮ್ಮ ಸ್ವಂತ ರಾಜಕೀಯ ಹಿತಾಸಕ್ತಿಗಳಿಗಾಗಿ ವಿದ್ಯಾರ್ಥಿಗಳು ಮತ್ತು ಯುವಕರನ್ನು ರಾಜಕೀಯ ಸಾಧನವಾಗಿ ಬಳಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ವಿದ್ಯಾರ್ಥಿಗಳ ಆಕಾಂಕ್ಷೆಗಳನ್ನು ಈಡೇರಿಸಲು ಮತ್ತು ಯುವ ಕಲ್ಯಾಣವನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಸಂಪೂರ್ಣವಾಗಿ ಬದ್ಧವಾಗಿದೆ. ವಿರೋಧ ಪಕ್ಷದ ನಾಯಕರು ಸಾರ್ವಜನಿಕರನ್ನು, ವಿಶೇಷವಾಗಿ ಯುವಕರು ಮತ್ತು ಮಕ್ಕಳನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದು ಆರೋಪಿಸಿದರು.

ಸಂಸತ್ತಿನಲ್ಲಿ ವಿರೋಧ ಪಕ್ಷದ ಗದ್ದಲದ ಕುರಿತು ಮಾತನಾಡಿದ ಸಚಿವ ರಾಜನಾಥ್ ಸಿಂಗ್, ಸರ್ಕಾರ, ಪ್ರತಿಯೊಂದು ವಿಷಯದ ಬಗ್ಗೆಯೂ ಅರ್ಥಪೂರ್ಣ ಚರ್ಚೆಗಳನ್ನು ನಡೆಸಲು ಸಿದ್ಧವಿದೆ. ಆದರೆ ಬೀದಿಗಳಲ್ಲಿ ಸಮಸ್ಯೆ ಪರಿಹರಿಸಲು ವಿರೋಧ ಪಕ್ಷ ಅನುಚಿತ ಪ್ರಯತ್ನ ಮಾಡುತ್ತಿದೆ ಎಂದು ದೂರಿದರು.

---

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಉತ್ತರ ಮೆಸಿಡೋನಿಯಾಗೆ ಭೇಟಿ ನೀಡಿದ ಸಂದರ್ಭದಲ್ಲಿ ಸ್ಕೋಪ್ಜೆ ನಗರದ ವಸ್ತುಸಂಗ್ರಹಾಲಯದಲ್ಲಿ ಮಹಾತ್ಮ ಗಾಂಧಿಯವರ ಪ್ರತಿಮೆಯನ್ನು ಅನಾವರಣಗೊಳಿಸಿದರು.

ಸಂಘರ್ಷ, ಅಸಹಿಷ್ಣುತೆ ಮತ್ತು ವಿಭಜನೆಯನ್ನು ಎದುರಿಸುತ್ತಿರುವ ಜಗತ್ತಿನಲ್ಲಿ ಗಾಂಧೀಜಿಯವರ ಸಂವಾದ, ಕರುಣೆ ಮತ್ತು ಶಾಂತಿಯುತ ಸಹಬಾಳ್ವೆಯ ಆದರ್ಶಗಳು ಹೆಚ್ಚು ಪ್ರಸ್ತುತವಾಗಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದರು.

---

ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ನ್ಯಾಯಾಂಗ ಅಧಿಕಾರಿಗಳ ನಿವೃತ್ತಿ ವಯಸ್ಸನ್ನು 60ರಿಂದ 61 ವರ್ಷಗಳಿಗೆ ಹೆಚ್ಚಿಸುವ ಕುರಿತು ಪರಿಗಣಿಸುವಂತೆ ಸುಪ್ರೀಂ ಕೋರ್ಟ್ ಇಂದು ನಿರ್ದೇಶನ ನೀಡಿದೆ.

ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ನ್ಯಾಯಪೀಠ, ನ್ಯಾಯಾಂಗ ಅಧಿಕಾರಿಗಳ ನಿವೃತ್ತಿ ವಯಸ್ಸನ್ನು ದೇಶಾದ್ಯಂತ 60 ರಿಂದ 62 ವರ್ಷಗಳಿಗೆ ಏಕರೂಪವಾಗಿ ಹೆಚ್ಚಿಸುವಂತೆ ಕೋರಿ ಸಲ್ಲಿಸಲಾದ ಅರ್ಜಿಯ ವಿಚಾರಣೆ ವೇಳೆ ಈ ನಿರ್ದೇಶನ ನೀಡಿತು.

ಈ ವಿಷಯದಲ್ಲಿ ಆಯಾ ಹೈಕೋರ್ಟ್‌ಗಳೊಂದಿಗೆ ಸಮಾಲೋಚಿಸಿ ರಾಜ್ಯ ಸರ್ಕಾರಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳು ತೀರ್ಮಾನ ಕೈಗೊಳ್ಳಬೇಕು ಎಂದು ಸುಪ್ರೀಂ ಕೋರ್ಟ್ ಸೂಚಿಸಿದೆ.

ಒಪ್ಪಿಗೆ ನೀಡಿದ ರಾಜ್ಯಗಳಲ್ಲಿ ನ್ಯಾಯಾಂಗ ಅಧಿಕಾರಿಗಳು 61 ವರ್ಷ ವಯಸ್ಸಿನವರೆಗೆ ಸೇವೆ ಮುಂದುವರಿಸಬಹುದಾಗಿದೆ.

---

ಐಎಎಸ್‌ವಿ ತ್ರಿವೇಣಿಯಲ್ಲಿ ಮೊದಲ ಬಾರಿಗೆ ಮೂರು ಸೇನೆಗಳು ಒಳಗೊಂಡ ಸಂಪೂರ್ಣ ಮಹಿಳಾ ಯಾತ್ರೆಯಾದ 'ಸಮುದ್ರ ಪ್ರದಕ್ಷಿಣ'ವು ಕೋಟ್ಯಂತರ ಭಾರತೀಯರು ಹೆಮ್ಮೆಪಡುವಂತೆ ಮಾಡಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ಐಎಎಸ್‌ವಿ ತ್ರಿವೇಣಿಯಲ್ಲಿ 'ಸಮುದ್ರ ಪ್ರದಕ್ಷಿಣ' ಯಾತ್ರೆಯನ್ನು ವರ್ಚುವಲ್ ಆಗಿ ಉದ್ಘಾಟಿಸಿ ಮಾತನಾಡಿದ ಅವರು, ಐಎಎಸ್‌ವಿ ತ್ರಿವೇಣಿ–ಆತ್ಮನಿರ್ಭರ ಭಾರತ ಮತ್ತು ದೇಶದ ನಾವೀನ್ಯತೆ, ಸಾಮರ್ಥ್ಯ ಹಾಗೂ ಆತ್ಮವಿಶ್ವಾಸದ ಜೀವಂತ ಉದಾಹರಣೆಯಾಗಿದೆ ಎಂದರು.

ಐಎಎಸ್‌ವಿ ತ್ರಿವೇಣಿ ಕೇವಲ ಸಮುದ್ರ ದಂಡಯಾತ್ರೆಯಲ್ಲ, ಭಾರತದ ಮೂರು ರಕ್ಷಣಾ ಪಡೆಗಳ ಶಕ್ತಿ ಮತ್ತು ಸಮನ್ವಯದ ಉದಾಹರಣೆಯಾಗಿದೆ ಎಂದು ಸಚಿವ ರಾಜನಾಥ್ ಸಿಂಗ್ ಹೇಳಿದರು.

---

ಇರಾನ್‌ಗೆ ಹಾರ್ಮುಜ್ ಜಲಸಂಧಿಯನ್ನು ನಿಯಂತ್ರಿಸಲು ಅವಕಾಶ ನೀಡುವುದು ಅಂತಾರಾಷ್ಟ್ರೀಯ ವ್ಯಾಪಾರ ಮತ್ತು ನೌಕಾಯಾನ ಸ್ವಾತಂತ್ರ್ಯಕ್ಕೆ ಅತ್ಯಂತ ಅಪಾಯಕಾರಿಯಾಗಲಿದೆ ಎಂದು ಅಮೆರಿಕದ ವಿದೇಶಾಂಗ ಸಚಿವ ಮಾರ್ಕೊ ರುಬಿಯೊ ಅಭಿಪ್ರಾಯಪಟ್ಟಿದ್ದಾರೆ.

ಮನಿಲಾದಲ್ಲಿ ಇಂದು ನಡೆದ ಆಸಿಯಾನ್ ವಿದೇಶಾಂಗ ಸಚಿವರ ಸಮ್ಮೇಳನದಲ್ಲಿ ಮಾತನಾಡಿದ ಅವರು, ಕಳೆದ ತಿಂಗಳು ಅಮೆರಿಕದೊಂದಿಗೆ ಮಾಡಿಕೊಂಡ ಮಾತುಕತೆಗಳಲ್ಲಿ ತನ್ನ ಬದ್ಧತೆಗಳನ್ನು ಪೂರೈಸಲು ಇರಾನ್ ವಿಫಲವಾಗಿದೆ ಎಂದು ಆರೋಪಿಸಿದರು.

ರಾಜತಾಂತ್ರಿಕತೆಗೆ ಅಮೆರಿಕ ಬದ್ಧವಾಗಿದೆ ಮತ್ತು ಇರಾನ್‌ನೊಂದಿಗೆ ಮಾತುಕತೆ ಮುಂದುವರಿಸಲು ಸಿದ್ಧವಾಗಿದೆ. ಮಾತುಕತೆಗಾಗಿ ನೇರ ಮತ್ತು ಪರೋಕ್ಷ ಮಾರ್ಗಗಳ ಮೂಲಕ ಅಮೆರಿಕವನ್ನು ಇರಾನ್ ಸಂಪರ್ಕಿಸಿದೆ ಎಂದು ಅವರು ಹೇಳಿದರು.

ಹಾರ್ಮುಜ್ ಜಲಸಂಧಿಯು ಮುಕ್ತವಾಗಿರಬೇಕು. ಯಾವುದೇ ದೇಶವು ಬಲವಂತದಿಂದ ಅಂತಾರಾಷ್ಟ್ರೀಯ ಹಡಗು ಮಾರ್ಗವನ್ನು ನಿಯಂತ್ರಿಸಲು ಅವಕಾಶ ನೀಡುವುದು ಜಾಗತಿಕ ವಾಣಿಜ್ಯವನ್ನು ದುರ್ಬಲಗೊಳಿಸುತ್ತದೆ ಎಂದು ಮಾರ್ಕೊ ರುಬಿಯೊ ಎಚ್ಚರಿಸಿದರು.

---

ಚೀನಾ ಓಪನ್ ಬ್ಯಾಡ್ಮಿಂಟನ್‌ನಲ್ಲಿ, ಒಲಿಂಪಿಕ್ ಪದಕ ವಿಜೇತೆ ಪಿ.ವಿ.ಸಿಂಧು ಇಂದು ನಡೆದ 32ನೇ ಸುತ್ತಿನ ಪಂದ್ಯದಲ್ಲಿ ಭಾರತದ ಉನ್ನತಿ ಹೂಡಾ ಅವರನ್ನು 21–14, 9–21, 21–10 ಅಂತರದಿಂದ ಸೋಲಿಸುವ ಮೂಲಕ ಮಹಿಳಾ ಸಿಂಗಲ್ಸ್ ವಿಭಾಗದಲ್ಲಿ ಎರಡನೇ ಸುತ್ತಿಗೆ ಮುನ್ನಡೆದರು.

ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಆಯುಷ್ ಶೆಟ್ಟಿ, ಇಂಡೋನೇಷ್ಯಾದ ಅಲ್ವಿ ಫರ್ಹಾನ್ ಅವರನ್ನು 21–17, 5–21, 21–17 ಅಂತರದಿಂದ ಸೋಲಿಸಿ, 16 ರ ಸುತ್ತಿಗೆ ತಲುಪಿದರು.

ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಎಂ.ಆರ್.ಅರ್ಜುನ್ ಮತ್ತು ಹರಿಹರನ್ ಜೋಡಿ, 32ನೇ ಸುತ್ತಿನ ಪಂದ್ಯದಲ್ಲಿ ಚೀನಾದ ವಾಂಗ್ ಚಾಂಗ್ ಮತ್ತು ಲಿಯಾಂಗ್ ವೀಕೆಂಗ್ ವಿರುದ್ಧ 16–21, 7–21 ಅಂತರದಿಂದ ಸೋತರು.

---

ಸ್ಕಾಟ್ಲೆಂಡ್‌ನ ಗ್ಲಾಸ್ಗೋದಲ್ಲಿ ನಾಳೆಯಿಂದ ಆರಂಭವಾಗಲಿರುವ 2026ರ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ 74 ರಾಷ್ಟ್ರಗಳು ಮತ್ತು ಸುಮಾರು 3 ಸಾವಿರ ಕ್ರೀಡಾಪಟುಗಳು 10 ಕ್ರೀಡೆಗಳಲ್ಲಿ ಸ್ಪರ್ಧಿಸಲಿದ್ದಾರೆ. ಈ ಕ್ರೀಡಾಕೂಟದಲ್ಲಿ ಒಟ್ಟು 215 ಚಿನ್ನದ ಪದಕಗಳನ್ನು ವಿಜೇತರು ಪಡೆಯಲಿದ್ದಾರೆ.

---

ಒಮಾನ್‌ನ ಮಸ್ಕಟ್‌ನಲ್ಲಿ ನಡೆಯುತ್ತಿರುವ ಎಫ್‌ಐಎಚ್ ಯುವ ಹಾಕಿ–5ಎಸ್ ಏಷ್ಯನ್ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಕಿರಿಯರ ಪುರುಷ ಮತ್ತು ಮಹಿಳಾ ತಂಡಗಳು ಉತ್ತಮ ಪ್ರದರ್ಶನ ಮುಂದುವರಿಸಿವೆ.

ಪುರುಷರ ವಿಭಾಗದಲ್ಲಿ ಭಾರತ, ಒಮಾನ್ ತಂಡವನ್ನು 14–0 ಗೋಲುಗಳಿಂದ ಮಣಿಸಿತು. ಬಳಿಕ ಪಾಕಿಸ್ತಾನ ವಿರುದ್ಧ 7–4 ಗೋಲುಗಳಿಂದ ಗೆಲುವು ದಾಖಲಿಸಿತು. ಈ ಪಂದ್ಯದಲ್ಲಿ ಕರಣ್ ಗೌತಮ್ ಹ್ಯಾಟ್ರಿಕ್ ಗೋಲು ಗಳಿಸಿದರು.

ಮಹಿಳೆಯರ ವಿಭಾಗದಲ್ಲಿ ಚೀನಾ ವಿರುದ್ಧ ಭಾರತ, 2–2 ಅಂತರದ ಡ್ರಾ ಸಾಧಿಸಿದರೆ, ಉಜ್ಬೇಕಿಸ್ತಾನ್ ವಿರುದ್ಧ 16–0 ಗೋಲುಗಳಿಂದ ಭರ್ಜರಿ ಜಯ ದಾಖಲಿಸಿತು.

___________ ಮುಕ್ತಾಯ ___________